ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ

ಸಿಸಿ ನಂ. **805/2021**

| | | | |
|---|---|---|---|
| ಹೆಸರು | : | ಪ್ರಕಾಶ | ಚಾ.ಸಾ.7 |
| ತಂದೆಯ ಹೆಸರು | : | ಸುಭಾಷ | ಪ್ರಾ.ಸಾ.7 |
| ವಯಸ್ಸು | : | 32 ವರ್ಷ | ದಿನಾಂಕಃ 04-04-2024 |
| ಉದ್ಯೋಗ | : | ಒಕ್ಕಲುತನ | |
| ವಾಸಸ್ಥಳ | : | ಚಾಂಗಲೇರಾ | |

ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ

ಪ್ರಾಸಾ-1 ರವರು ನನಗೆ ಗೊತ್ತು. ಪ್ರಾಸಾ-2 ರಿಂದ 5 ರವರು ನನಗೆ ಗೊತ್ತಿಲ್ಲ. ಮೃತ ನಾಗಪ್ಪ ನನಗೆ ಗೊತ್ತು. ಆರೋಪಿ ನನಗೆ ಗೊತ್ತಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾಗಪ್ಪರವರು ಹೇಗೆ ಮೃತ ಪಟ್ಟರು ಎಂದು ನನಗೆ ಗೊತ್ತಿಲ್ಲ. ನಾನು ಪೋಲಿಸರಿಗೆ ಯಾವುದೇ ಮಾಹಿತಿ ನೀಡಿಲ್ಲ ಮತ್ತು ಪೋಲಿಸರು ನನಗೆ ಆರೋಪಿಗೆ ತೋರಿಸಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಹೇಳಿಕೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ-

ದಿನಾಂಕ 09-10-2020 ರಂದು ಸಾಯಂಕಾಲ 7.15 ಗಂಟೆ ಸುಮಾರಿಗೆ ನಾನು ಮನೆಯಲ್ಲಿದ್ದಾಗ ಪ್ರಾಸಾ-1 ರವರು ನನಗೆ ತಿಳಿಸಿದ್ದೇನೆಂದರೆ ನಾಗಪ್ಪರವರು ಸಂತೆ ಮಾಡಿಕೊಂಡು ಸುಲೇಪೇಟ ಗ್ರಾಮಕ್ಕೆ ಹೋದಾಗ ಮಧಾಹ್ನ 2.15 ಗಂಟೆಗೆ ಆಟೋ ತೆಗೆದುಕೊಂಡು ಸುಲೇಪೇಟದಿಂದ ಕುಪನೂರ ಗ್ರಾಮಕ್ಕೆ ಬರುತ್ತಿರುವಾಗ ಆಟೋ ಚಾಲಕನು ಆಟೋವನ್ನು ಅತಿ ವೇಗ ಮತ್ತು ನಿಸ್ಕಾಳಜಿತನದಿಂದ ಚಲಾಯಿಸಿಕೊಂಡು ಬಂದು ನಿಯಂತ್ರಣ ಕಳೆದುಕೊಂಡು ಪಲ್ಟಿಯಾಗಿ ಬಿದ್ದಿದ್ದು ಆಗ ಆರೋಪಿ ಆಟೋವನ್ನು ಬಿಟ್ಟು ಓಡಿ ಹೋಗಿರುತ್ತಾನೆ ಆದ್ದರಿಂದ ನಾಗಪ್ಪನಿಗೆ ಗಾಯಗಳಾಗಿರುತ್ತವೆ ಎಂದರೆ ಸರಿಯಲ್ಲ. ಸದರಿ ಗಾಯಗಳ ಕಾರಣ ನಾಗಪ್ಪ ಮೃತಪಟ್ಟಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಈ ರೀತಿ ನಾನೂ ದಿನಾಂಕ 10-10-2020 ಮತ್ತು 25-10-2020 ರಂದು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-15 ಮತ್ತು 16 ಎಂದು

ಗುರುತಿಸಲಾಯಿತು. ಆರೋಪಿಯ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ ಎಮ್.ಎಸ್.ಎಸ್. ವಕೀಲರಿಂದಃ-** ಇಲ್ಲ

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ**